ವಿವರಿಸಲಾಗಿದೆ ಇದರ ಜೊತೆಗೆ ಶಾಲೆಗಳಲ್ಲಿ ಲೈಂಗಿಕ ದೌರ್ಜನ್ಯ ನಡೆಯದಂತೆ ಮುಂಜಾಗ್ರತಾ ಕ್ರಮ ತೆಗೆದುಕೊಳ್ಳಲು ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ದಿ 13 7 2006ರಲ್ಲಿ ರಾಜ್ಯದ ಎಲ್ಲಾ ಉಪ ನಿರ್ದೇಶಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸುತ್ತೋಲೆಯನ್ನು ಕಳುಹಿಸಲಾಗಿದೆ

ಈ) ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಯಲ್ಲಿ ಶೇ 50ರಷ್ಟು ಹುದ್ದೆಗಳನ್ನು ಮಹಿಳಾ ಅಭ್ಯರ್ಥಿಗಳಿಗೆ ಕಾಯ್ದಿರಿಸಲಾಗಿದೆ ಆದಷ್ಟು ಹೆಣ್ಣುಮಕ್ಕಳ ಶಾಲೆಗಳಿಗೆ ಶಿಕ್ಷಕಿಯರನ್ನೇ ನೇಮಕಾತಿ ಮಾಡಲು ಕ್ರಮವಹಿಸಲಾಗುತ್ತಿದೆ

548(856) ಶ್ರೀ ಸಿದ್ದುಸಾವದಿ (ಜಮಖಂಡಿ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಜಮಖಂಡಿ ತಾಲ್ಲೂಕಿನಲ್ಲಿ ಎಷ್ಟು ಪದವಿ ಪೂರ್ವ ಕಾಲೇಜುಗಳಿವೆ, ಅಲ್ಲಿ ಯಾವ ಯಾವ ವಿಷಯ ಬೋಧನೆಯನ್ನು ಮಾಡಲಾಗುವುದು, (ಸಂಪೂರ್ಣ ವಿವರ ಒದಗಿಸುವುದು)

ಆ) ವಿಜ್ಞಾನ ಮತ್ತು ವಾಣಿಜ್ಯ ವಿಭಾಗಗಳನ್ನು ಎಲ್ಲಾ ಕಾಲೇಜುಗಳಲ್ಲಿ ಪ್ರಾರಂಭಿಸಲು ಇರುವ ತೊಂದರೆಗಳೇನು, ಗ್ರಾಮೀಣ ಮಕ್ಕಳು ವಿಜ್ಞಾನ ಮತ್ತು ವಾಣಿಜ್ಯ ವಿಭಾಗಗಳಲ್ಲಿ ಅಧ್ಯಯನ ಮಾಡಲು ಈ ವಿಭಾಗಗಳನ್ನು ಯಾವಾಗ ಪ್ರಾರಂಭಿಸಲಾಗುವುದು,

ಇ) ತಾಲ್ಲೂಕಿನಲ್ಲಿ ಎಷ್ಟು ಕಾಲೇಜುಗಳಿಗೆ ಸ್ವಂತ ಕಟ್ಟಡಗಳಿವೆ, ಉಳಿದವುಗಳಿಗೆ ಯಾವಾಗ ಕಟ್ಟಡಗಳನ್ನು ಒದಗಿಸಲಾಗುವುದು,

ಈ) ಪ್ರೌಢಶಾಲೆ ಮತ್ತು ಕಾಲೇಜುಗಳಿಗೆ ಶಿಕ್ಷಕರ ಕೊರತೆ ಇದ್ದು ಯಾವಾಗ ಭರ್ತಿ ಮಾಡಲಾಗುವುದು?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಜಮಖಂಡಿ ತಾಲ್ಲೂಕಿನಲ್ಲಿ ಒಟ್ಟು 17 ಪದವಿ ಪೂರ್ವ ಕಾಲೇಜುಗಳಿವೆ ಇವುಗಳಲ್ಲಿ 07 ಸರ್ಕಾರಿ ಪದವಿ ಪೂರ್ವ ಕಾಲೇಜುಗಳು, 07 ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳು ಮತ್ತು 03 ಖಾಸಗಿ ಅನುದಾನರಹಿತ ಪದವಿ ಪೂರ್ವ ಕಾಲೇಜುಗಳು ಇರುತ್ತವೆ ಇಲ್ಲಿ ಕಲಾ,

ವಾಣಿಜ್ಯ ಮತ್ತು ವಿಜ್ಞಾನ ವಿಷಯಗಳಲ್ಲಿ ಬೋಧಿಸಲಾಗುತ್ತಿದೆ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ

ಆ) ಪ್ರತಿಯೊಂದು ಪದವಿ ಪೂರ್ವ ಕಾಲೇಜಿನಲ್ಲಿ ನಿಯಮಾನುಸಾರ ಒಂದು ವಿಭಾಗಕ್ಕೆ ಕನಿಷ್ಟ 40, ಗರಿಷ್ಟ 100 ವಿದ್ಯಾರ್ಥಿಗಳ ದಾಖಲಾತಿ ಅಗತ್ಯ ಗ್ರಾಮೀಣ ಪ್ರದೇಶಗಳಲ್ಲಿ ವಾಣಿಜ್ಯ ಮತ್ತು ವಿಜ್ಞಾನ ಸಂಯೋಜನೆಯನ್ನು ಆಯ್ಕೆ ಮಾಡಿಕೊಳ್ಳುವ ವಿದ್ಯಾರ್ಥಿಗಳು ಕಡಿಮೆ ಸಂಖ್ಯೆಯಲ್ಲಿರುವುದರಿಂದ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿಜ್ಞಾನ ಮತ್ತು ವಾಣಿಜ್ಯ ವಿಭಾಗಗಳನ್ನು ಪ್ರಾರಂಭಿಸಲಾಗುತ್ತಿಲ್ಲ ಗ್ರಾಮೀಣ ಪ್ರದೇಶಗಳಲ್ಲಿನ ಪದವಿ ಪೂರ್ವ ಕಾಲೇಜುಗಳಲ್ಲಿ ಇಂತಹ ಬೇಡಿಕೆ ಬಂದಲ್ಲಿ ಪರಿಗಣಿಸಲಾಗುತ್ತಿದೆ

ಇ) ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳು ಸ್ವಂತ ಕಟ್ಟಡ ಹೊಂದಿರುತ್ತವೆ 04 ಸರ್ಕಾರಿ ಪದವಿ ಪೂರ್ವ ಕಾಲೇಜುಗಳು ಸ್ವಂತ ಕಟ್ಟಡ ಹೊಂದಿರುತ್ತವೆ 03 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಆರ್ ಐ ಡಿ ಎಫ್ –12 ಯೋಜನೆಯಲ್ಲಿ ಹೊಸ ಕಟ್ಟಡ ನಿರ್ಮಾಣಕ್ಕೆ ಕ್ರಮವಹಿಸಲಾಗುತ್ತಿದೆ

ಈ) ಸರ್ಕಾರಿ ಪ್ರೌಢಶಾಲೆಗಳಲ್ಲಿ 37 ಶಿಕ್ಷಕರ ಹುದ್ದೆ ಮತ್ತು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ 13 ಉಪನ್ಯಾಸಕರ ಹುದ್ದೆಗಳು ಖಾಲಿ ಇವೆ ಈ ಹುದ್ದೆಗಳನ್ನು ನೇರ ನೇಮಕಾತಿ/ಬಡ್ತಿ ಹಾಗೂ ಪದೋನ್ನತಿ ಮೂಲಕ ತುಂಬಿಕೊಳ್ಳಲಾಗುತ್ತಿದೆ

549(857) ಶ್ರೀ ಸಿದ್ದು ಸಾವದಿ (ಜಮಖಂಡಿ) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಜಮಖಂಡಿ ತಾಲ್ಲೂಕಿನಲ್ಲಿ 1 4 2005ರಿಂದ ಇಲ್ಲಿಯವರೆಗೆ ಆಯಾ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆ ಆದ ಅನುದಾನವೆಷ್ಟು, (ಇಲಾಖಾವಾರು ವಿವರ ಒದಗಿಸುವುದು)

ಆ) ಒಟ್ಟು ಕಾಮಗಾರಿಗಳ ಸಂಖ್ಯೆ ಎಷ್ಟು, (ಆಯಾ ಗ್ರಾಮ ಪಂಚಾಯತಿವಾರು ಕಾಮಗಾರಿಗಳ ಹೆಸರು ಸಹಿತ ವಿವರಣೆ ಒದಗಿಸುವುದು), ಈ ಎಲ್ಲಾ ಕಾಮಗಾರಿಗಳನ್ನು ಮುಗಿಸಲಾಗಿದೆಯೇ,

ಇ) ಎಷ್ಟು ಗ್ರಾಮ ಪಂಚಾಯತಿಗಳಲ್ಲಿ ಯೋಜನೆ ಹಣ ದುರ್ಬಳಕೆ ಆಗಿದೆ, ಈ ಬಗ್ಗೆ ಯಾವ ಕ್ರಮ ಜರುಗಿಸಲಾಗಿದೆ,